ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

10

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ        ದಿನಾಂಕ : DATE : 25/6/2020

# ಶಾಸಕ, ಸಚಿವರಿಗೆ ಕುಮಾರಕೃಪಾ ಅತಿಥಿಗೃಹವೇ 'ಕೊರೋನಾ ಆಸ್ಪತ್ರೆ'

## ಗೆಸ್ಟ್‌ಹೌಸಲ್ಲಿ 100 ಹಾಸಿಗೆಗಳ ಕೋವಿಡ್ ಕೇರ್ ಸೆಂಟರ್

25/6/20

**ಬೆಂಗಳೂರು:** ರಾಜ್ಯ ಸರ್ಕಾರದ ಸಚಿವ, ಶಾಸಕರು ಸೇರಿದಂತೆ ಯಾವುದೇ ಜನಪ್ರತಿನಿಧಿಗಳು ಹಾಗೂ ಹಿರಿಯ ಶ್ರೇಣಿಯ ಅಧಿಕಾರಿಗಳು ಕೊರೋನಾ ಸೋಂಕಿಗೆ ತುತ್ತಾದರೆ ಅವರ ಚಿಕಿತ್ಸೆಗೆ ಕುಮಾರ ಕೃಪಾ ಅತಿಥಿ ಗೃಹವನ್ನು ನಿಗದಿಪಡಿಸಲಾಗಿದೆ. ಅತಿಥಿ ಗೃಹದ ಒಂದು ವಿಭಾಗದ 100 ಹಾಸಿಗೆಗಳ ಕೋವಿಡ್ ಕೇರ್ ಸೆಂಟರ್ ಆಗಿ ಪರಿವರ್ತಿಸಲಾಗುವುದು. ಉಳಿದ ವಿಭಾಗದ ಕೊಠಡಿಗಳಲ್ಲಿ ಶೇ. 30 ನೋಂದಣಿ ಮೀರದಂತೆ ಕ್ರಮ ಕೈಗೊಳ್ಳಬೇಕು. ಈ ಕೇಂದ್ರದಲ್ಲಿ ಶಾಸಕರು, ಸಚಿವರು, ವಿಧಾನ ಪರಿಷತ್ ಸದಸ್ಯರು, ಸರ್ಕಾರದ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳು, ಹಿರಿಯ ಶ್ರೇಣಿಯ ಅಧಿಕಾರಿಗಳಿಗೆ ಇಲ್ಲಿ ಚಿಕಿತ್ಸೆ ನೀಡಲು ವ್ಯವಸ್ಥೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಸಾರ್ವಜನಿಕರು ಗುಂಪುಗೂಡದಂತೆ ಎಚ್ಚರ ವಹಿಸುವುದರ ಜತೆಗೆ ಸಂದರ್ಶಕರ ಭೇಟಿ ನಿರ್ಬಂಧಿಸಬೇಕು. ಪ್ರವೇಶ ದ್ವಾರದಲ್ಲಿ ಥರ್ಮಲ್ ಸ್ಕ್ಯಾನಿಂಗ್ ಬಳಸಿ ಆರೋಗ್ಯ ತಪಾಸಣೆ ಮಾಡಬೇಕು ಎಂದು ಆದೇಶದಲ್ಲಿ ಹೇಳಲಾಗಿದೆ.

**ಐಷಾರಾಮಿ ಬಂಗಲೆ ಸರಿಯೇ?:** ಜನಸಾಮಾನ್ಯರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಿ, ಜನಪ್ರತಿನಿಧಿಗಳ ಚಿಕಿತ್ಸೆಗೆ ಐಷಾರಾಮಿ ಬಂಗಲೆ ನಿಗದಿಪಡಿಸಿರುವ ಸರ್ಕಾರದ ನಿರ್ಧಾರದ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ ಆರಂಭವಾಗಿದೆ. ಅನೇಕರು ಈ ಬಗ್ಗೆ ಕಿಡಿ ಕಾರಿದ್ದಾರೆ.